ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕೋವಿಡ್-19 14

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ ದಿನಾಂಕ : DATE 21/4/2021


## ಸಮರ್ಪಕ ಬಳಕೆಗೆ ಮಾರ್ಗಸೂಚಿ | ಬಿಬಿಎಂಪಿ ಮುಖ್ಯ ಆಯುಕ್ತ ಮಾಹಿತಿ

# 300 ಟನ್ ಪ್ರಾಣವಾಯು ಲಭ್ಯ

21-4-21

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ನಗರದಲ್ಲಿ 300 ಟನ್ ಪ್ರಾಣವಾಯು (ಆಕ್ಸಿಜನ್) ಲಭ್ಯವಿದ್ದು, ಉಸಿರಾಟ ತೊಂದರೆಯಿಂದ ಬಳಲುತ್ತಿರುವ ಸೋಂಕಿತರಿಗೆ ಪೂರೈಕೆ ಮಾಡಲಾಗುವುದು ಎಂದು ಬಿಬಿಎಂಪಿ ಮುಖ್ಯ ಆಯುಕ್ತ ಗೌರವ್ ಗುಪ್ತ ತಿಳಿಸಿದ್ದಾರೆ.

ನಗರದಲ್ಲಿ ಕೋವಿಡ್ ಸೋಂಕು ಪ್ರಕರಣ ಪ್ರತಿನಿತ್ಯ ತೀವ್ರವಾಗಿ ಉಲ್ಬಣಗೊಳ್ಳುತ್ತಿದೆ. ಈ ಪೈಕಿ ಉಸಿರಾಟದ ತೊಂದರೆಯಿಂದ ಬಳಲುವವರಿಗೆ ಪ್ರಾಣವಾಯು ಪೂರೈಕೆ ಮಾಡುವುದು ಸವಾಲಿನ ಕೆಲಸವಾಗಿದೆ. ಸಾಮಾನ್ಯ ದಿನಗಳಲ್ಲಿ ಉಪಯೋಗಿಸುವ ಪ್ರಾಣವಾಯು ಬಳಕೆಗಿಂತ 5 ಪಟ್ಟು ಅಧಿಕ ಪ್ರಮಾಣದಲ್ಲಿ ಬೇಡಿಕೆಯಿದೆ. ಪ್ರಸ್ತುತ ನಗರದಲ್ಲಿ 300 ಟನ್ ಪ್ರಾಣವಾಯು ಲಭ್ಯವಿದ್ದು, ಅದನ್ನು ಹಂತಹಂತವಾಗಿ ಸೋಂಕಿತರಿಗೆ ನೀಡಲು ಆಸ್ಪತ್ರೆಗಳಿಗೆ ವಿತರಿಸಲಾಗುವುದು ಎಂದು ಮಂಗಳವಾರ ಸುದ್ದಿಗಾರರಿಗೆ ಮಾಹಿತಿ ನೀಡಿದರು.

**ಸಮಿತಿ ರಚನೆ:** ಈಗ ಲಭ್ಯವಿರುವ ಪ್ರಾಣವಾಯುವನ್ನು ಎಲ್ಲ ಕೋವಿಡ್ ನಿಗದಿತ ಹಾಸಿಗೆ ಹೊಂದಿರುವ ಆಸ್ಪತ್ರೆಗಳಿಗೆ ಪೂರೈಕೆ ಮಾಡಲು ಪ್ರಾಣವಾಯು ಪೂರೈಕೆ ಮತ್ತು ನಿರ್ವಹಣಾ ಸಮಿತಿಯನ್ನು ಸರ್ಕಾರ ರಚಿಸಿದೆ. ಲಭ್ಯವಿರುವ ಆಮ್ಲಜನಕವನ್ನು ಎಲ್ಲ ಆಸ್ಪತ್ರೆಗಳಿಗೆ ಸಮರ್ಪಕವಾಗಿ ವಿತರಣೆ ಮಾಡುವುದು ಮತ್ತು ಬಳಕೆ ಮಾಡುವ ಬಗ್ಗೆ ಸಮಿತಿ ನಿಗಾ ವಹಿಸಲಿದೆ. ಈ ಕುರಿತು ಸಿಎಂ ಮತ್ತು ಕೈಗಾರಿಕಾ ಸಚಿವರೊಂದಿಗೆ ಚರ್ಚೆ ನಡೆಸಿದ್ದು, ಅಗತ್ಯ ಪ್ರಮಾಣದ ಪ್ರಾಣವಾಯು ಪೂರೈಸುವುದಾಗಿ ತಿಳಿಸಿದ್ದಾರೆ ಎಂದು ಗೌರವ್ ಗುಪ್ತ ಹೇಳಿದರು.




ನಗರದ ಪೀಣ್ಯ 2ನೇ ಹಂತದ ಕಾರ್ಖಾನೆ ಘಟಕದಲ್ಲಿ ಆಕ್ಸಿಜನ್ ಭರ್ತಿಗಾಗಿ ಹಾಗೂ ತುಂಬಿದ ಸಿಲಿಂಡರ್‌ಗಳ ವಿಲೇವಾರಿಯಲ್ಲಿ ತೊಡಗಿರುವ ಕಾರ್ಮಿಕರು.

### ಶಿಸ್ತುಕ್ರಮದ ಎಚ್ಚರಿಕೆ

**ನಗರದಲ್ಲಿ ಪ್ರಾಣವಾಯು ಕೊರತೆಯಾಗಿಲ್ಲ. ಆದರೆ, ಅನಗತ್ಯ ಬಳಕೆಯಲ್ಲಿ ಕೊರತೆ ಕಂಡುಬರಲಿದೆ. ಹೀಗಾಗಿ ಲಭ್ಯವಿರುವ ಆಕ್ಸಿಜನ್‌ನ್ನು ಸಮರ್ಪಕವಾಗಿ ಬಳಕೆ ಮಾಡುವ ನಿಟ್ಟಿನಲ್ಲಿ ಶೀಘ್ರವಾಗಿ ಮಾರ್ಗಸೂಚಿ ಹೊರಡಿಸಲಾಗುವುದು. ಈ ಮಾರ್ಗಸೂಚಿ ಅನ್ವಯ ಆಕ್ಸಿಜನ್ ಸಿಲಿಂಡರ್‌ನ್ನು ಆಸ್ಪತ್ರೆಗಳಿಗೆ ರವಾನಿಸಲಾಗುವುದು. ಜತೆಗೆ ಆಸ್ಪತ್ರೆಗಳಲ್ಲಿ ಅನಗತ್ಯ ಬಳಕೆಗೆ ಕಡಿವಾಣ ಹಾಕಲಾಗುವುದು. ಒಂದು ವೇಳೆ ಪ್ರಾಣವಾಯು ಬಳಕೆ ಮಾರ್ಗಸೂಚಿ ಉಲ್ಲಂಘಿಸಿದ ಆಸ್ಪತ್ರೆಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ಗೌರವ್ ಗುಪ್ತ ಎಚ್ಚರಿಕೆ ನೀಡಿದರು.**

## ಕರೊನಾ ಬಗ್ಗೆಯೇ ನಿಗಾ ವಹಿಸಿ ಕೆಲಸ

**ಬೆಂಗಳೂರು:** ಇನ್ನು ಎರಡು ತಿಂಗಳು ಕರೊನಾ ಬಗ್ಗೆಯೇ ಹೆಚ್ಚು ನಿಗಾ ವಹಿಸಿ ಕೆಲಸ ಮಾಡುವಂತೆ ಸಿಬ್ಬಂದಿಗೆ ಆಯಾ ಇಲಾಖೆ ಮೇಲಾಧಿಕಾರಿಗಳು ತಾಕೀತು ಮಾಡಿದ್ದಾರೆ. ಇಲಾಖೆಗಳ ಕೆಲಸಗಳು ಈಗ ಮೊದಲ ಆದ್ಯತೆ ಆಗುವುದು ಬೇಡ. ಸರ್ಕಾರ ಕಾಲಕಾಲಕ್ಕೆ ನೀಡುವ ನಿರ್ದೇಶನಗಳನ್ನು ಪರಿಪಾಲನೆ ಮಾಡಲು ಮತ್ತು ಜನರಲ್ಲಿ ಜಾಗೃತಿ ಮೂಡಿಸಲು ಎಲ್ಲ ಹಂತದ ಅಧಿಕಾರಿಗಳು ಮತ್ತು ನೌಕರರು ಸಹಕಾರ ನೀಡಬೇಕು ಎಂದು ಸೂಚಿಸಿದ್ದಾರೆ. ಗ್ರಾಮ ಮಟ್ಟದಿಂದ ಹಿಡಿದು ತಾಲೂಕು ಮತ್ತು ಜಿಲ್ಲಾ ಮಟ್ಟ ಹಾಗೂ ನಗರಗಳಲ್ಲಿ ಅಧಿಕಾರಿಗಳು ಮತ್ತು ನೌಕರರಿಗೆ ಕೆಲ ಉಸ್ತುವಾರಿ ಜವಾಬ್ದಾರಿ ವಹಿಸಬೇಕು ಎಂದು ಸಲಹೆಗಳನ್ನು ನೀಡಲಾಗಿದೆ. ಕಳೆದ ವರ್ಷ ಉಸ್ತುವಾರಿ ಅಧಿಕಾರಿಗಳಾಗಿ ಕೆಲಸ ಮಾಡಿದ ವಾರ್ಡ್ ಮತ್ತು ವಿಭಾಗಗಳಿಗೆ ಈ ಬಾರಿಯೂ ಅದೇ ಅಧಿಕಾರಿಗಳ ಉಸ್ತುವಾರಿ ನೀಡಲು ನಿರ್ಧರಿಸಲಾಗಿದೆ. ಅಧಿಕಾರಿಗಳು ಮತ್ತು ನೌಕರರಿಗೆ ಮಾದರಿ ನೀತಿಸಂಹಿತೆಯನ್ನು ಸಿದ್ಧಪಡಿಸಿ ಸುತ್ತೋಲೆ ಹೊರಡಿಸಲು ನಿರ್ಧರಿಸಲಾಗಿದೆ ಎಂದು ಸಚಿವಾಲಯದ ಮೂಲಗಳು ತಿಳಿಸಿವೆ.

**» ನೌಕರರಿಗೆ ಮೇಲಾಧಿಕಾರಿಗಳ ಸೂಚನೆ**

## ನಗರದಲ್ಲಿ 143 ಪೊಲೀಸರಿಗೆ ಕರೊನಾ

**ಬೆಂಗಳೂರು:** ಪೊಲೀಸ್ ಇಲಾಖೆಯಲ್ಲಿ ಮತ್ತೆ ಕರೊನಾ ಆತಂಕ ಎದುರಾಗಿದ್ದು, ರಾಜ್ಯದಲ್ಲಿ ಪ್ರಸ್ತುತ 240 ಪೊಲೀಸರು ಕರೊನಾದಿಂದ ಬಳಲುತ್ತಿದ್ದಾರೆ. ಈ ಪೈಕಿ ಬೆಂಗಳೂರಿನ 143 ಪೊಲೀಸರಿದ್ದಾರೆ.

ರಾಜ್ಯದಲ್ಲಿ ಕರೊನಾ 2ನೇ ಅಲೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಪೊಲೀಸ್ ಅಧಿಕಾರಿ, ಸಿಬ್ಬಂದಿ ಹಾಗೂ ಅವರ ಕುಟುಂಬದಲ್ಲಿ ಆತಂಕ ಉಂಟಾಗಿದೆ. ಪೊಲೀಸರ ಯೋಗಕ್ಷೇಮಕ್ಕಾಗಿ ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಿದರೂ ಮುಂಚೂಣಿಯಲ್ಲಿ ಸಾರ್ವಜನಿಕವಾಗಿ ಕಾರ್ಯ ನಿರ್ವಹಿಸುವ ಹಿನ್ನೆಲೆಯಲ್ಲಿ ಕರೊನಾ ಸೋಂಕಿಗೆ ತುತ್ತಾಗುವ ಸಾಧ್ಯತೆ ಹೆಚ್ಚಾಗಿರುತ್ತದೆ. ಪೊಲೀಸ್ ಸಿಬ್ಬಂದಿ ಹಾಗೂ ಅವರ ಕುಟುಂಬದಲ್ಲಿರುವ 45 ವರ್ಷ ಮೇಲ್ಪಟ್ಟ ಸದಸ್ಯರು ಲಸಿಕೆಯನ್ನು ಕಡ್ಡಾಯವಾಗಿ ಹಾಕಿಸಬೇಕು ಎಂದು ಸುತ್ತೋಲೆ ಹೊರಡಿಸಲಾಗಿದೆ. ಇದರ ಬೆನ್ನಲ್ಲೇ ಠಾಣೆ ಮತ್ತು ಕಚೇರಿಗಳ ಮುಂಭಾಗ ಸಾರ್ವಜನಿಕರ ಭೇಟಿಗೆ ಪ್ರತ್ಯೇಕ ವ್ಯವಸ್ಥೆಗಳನ್ನು ಮಾಡಲಾಗಿದೆ.